### 44. ಕೇಂದ್ರ ಗೃಹ ಸಚಿವಾಲಯದಿಂದ ರಾಜ್ಯ ಸರ್ಕಾರಗಳಿಗೆ ಕಟ್ಟುನಿಟ್ಟಿನ ನಿರ್ದೇಶನ

ಲಾಕ್‌ಡೌನ್ ತೆರವು ಮಾರ್ಗಸೂಚಿ ಅನ್ವಯ ಸೂಚಿಸಲಾಗಿರುವ ರಾತ್ರಿ 9ರಿಂದ ಮುಂಜಾನೆ 5ರವರೆಗಿನ ಅವಧಿಯಲ್ಲಿ ಅಗತ್ಯ ಸೇವೆಗಳನ್ನು ಹೊರತುಪಡಿಸಿ ಜನ ಸಂಚಾರವನ್ನು ಕಟ್ಟುನಿಟ್ಟಾಗಿ ನಿಷೇಧಿಸಬೇಕು ಎಂದು ಕೇಂದ್ರ ಸರ್ಕಾರವು ರಾಜ್ಯಗಳಿಗೆ ಸೂಚನೆ ನೀಡಿದೆ.

"ರಾತ್ರಿ 9ರಿಂದ ಮುಂಜಾನೆ 5ರವರೆಗಿನ ಜನರ ಸಂಚಾರಕ್ಕೆ ನಿರ್ಬಂಧ ವಿಧಿಸಿರುವ ಉದ್ದೇಶ ಸಾಮಾಜಿಕ ಅಂತರ ಕಾಯ್ದುಕೊಳ್ಳುವಿಕೆ ಮತ್ತು ಜನಸಂದಣಿ ತಡೆಯುವುದಾಗಿದೆ. ಇದನ್ನು ಸರ್ಕಾರಗಳು ಅರ್ಥ ಮಾಡಿಕೊಳ್ಳಬೇಕು" ಎಂದು ಕೇಂದ್ರ ಗೃಹ ಸಚಿವಾಲಯ ಕಾರ್ಯದರ್ಶಿ ಅಜಯ್ ಭಲ್ಲಾ ಅವರು ರಾಜ್ಯಗಳಿಗೆ ಬರೆದಿರುವ ಪತ್ರದಲ್ಲಿ ತಿಳಿಸಿದ್ದಾರೆ.

ಸಂಚಾರ ನಿರ್ಬಂಧ ಜಾರಿ ನೆಪದಲ್ಲಿ ಅಗತ್ಯ ಸೇವೆಗಳಿಗೆ ಅಡ್ಡಿಪಡಿಸಬಾರದು. ಸರಕುಗಳ ಲೋಡಿಂಗ್ ಮತ್ತು ಅನ್ ಲೋಡಿಂಗ್, ರಾಜ್ಯ-ರಾಷ್ಟ್ರೀಯ ಹೆದ್ದಾರಿಗಳಲ್ಲಿ ಬಸ್, ಟ್ರಕ್‌ಗಳ ಸಂಚಾರ ಮತ್ತು ರೈಲು, ವಿಮಾನಗಳಿಂದ ಇಳಿದು ಮನೆ ತಲುಪುವವರೆಗೆ ನಿರ್ಬಂಧ ಅನ್ವಯಿಸುವುದಿಲ್ಲ. ಆದರೆ ಅನಗತ್ಯವಾಗಿ ಸಂಚರಿಸುವವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ. ಮೇ 30ರಂದು ಹೊರಡಿಸಲಾಗಿರುವ ಮಾರ್ಗಸೂಚಿಗಳನ್ನು ಸರಿಯಾಗಿ ಅರಿತುಕೊಳ್ಳುವಂತೆಯೂ ಭಲ್ಲಾ ಸೂಚಿಸಿದ್ದಾರೆ.

**10,956 ಹೊಸ ಸೋಂಕಿತರು:** ದೇಶದಲ್ಲಿ ಹೊಸ ಸೋಂಕಿತರ ಸಂಖ್ಯೆ ಹತ್ತು ಸಾವಿರದ ಗಡಿ ದಾಟಿ ದಾಖಲೆ ಬರೆದಿದೆ. ಕೇಂದ್ರ ಆರೋಗ್ಯ ಸಚಿವಾಲಯದ ಮಾಹಿತಿಯಂತೆ 24 ಗಂಟೆಗಳ ಅವಧಿಯಲ್ಲಿ 10,956 ಹೊಸ ಪ್ರಕರಣಗಳು ಪತ್ತೆಯಾಗಿದೆ. ಇದೇ ಅವಧಿಯಲ್ಲಿ 396 ಮಂದಿ ಸೋಂಕಿಗೆ ಬಲಿಯಾಗಿದ್ದಾರೆ. ವರದಿಯಂತೆ ದೇಶದಲ್ಲಿ ಕೊರೊನಾ ಸೋಂಕಿತರ ಸಂಖ್ಯೆ 3 ಲಕ್ಷ ದಾಟಿದೆ. ಆ ಪೈಕಿ 1.49 ಲಕ್ಷ ಮಂದಿ ಗುಣಮುಖರಾಗಿದ್ದು, 1.43 ಲಕ್ಷ ಮಂದಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಮಹಾರಾಷ್ಟ್ರದಲ್ಲಿ ಸೋಂಕಿತರ ಸಂಖ್ಯೆ ಒಂದು ಲಕ್ಷ ದಾಟಿದೆ.

ಆಧಾರ:ವಿಜಯ ಕರ್ನಾಟಕ, ದಿನಾಂಕ: 13.06.2020